# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: | 9(61) |
| ಮಾನ್ಯ ಸದಸ್ಯರ ಹೆಸರು: | ಡಾ: ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸುವ ಸಚಿವರು: | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು |
| ಉತ್ತರಿಸಬೇಕಾದ ದಿನಾಂಕ: | 15.07.2024. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕಲ್ಯಾಣ ಕರ್ನಾಟಕದ ಜಿಲ್ಲೆಗಳಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ 19 ಸಾವಿರಕ್ಕಿಂತ ಹೆಚ್ಚು ಶಿಕ್ಷಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಬಂದಿದೆ. |
| ಆ) | ಈ ಭಾಗದಲ್ಲಿ ಶಿಕ್ಷಕರ ಕೊರತೆಯನ್ನು ನೀಗಿಸಲು 371 (ಜೆ) ಅಡಿಯಲ್ಲಿ ಹುದ್ದೆ ಭರ್ತಿ ಮಾಡಲು ಸರ್ಕಾರ ಕ್ರಮಕೈಗೊಳ್ಳದಿರಲು ಕಾರಣಗಳೇನು; | ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವ ಕುರಿತು ಕಲ್ಯಾಣ ಕರ್ನಾಟಕ ಪ್ರದೇಶವೂ ಸೇರಿದಂತೆ ಪ್ರಾಥಮಿಕ ಶಾಲೆಗಳಿಗೆ 7500 ಹಾಗೂ ಪ್ರೌಢ ಶಾಲೆಗಳಿಗೆ 2500 ಒಟ್ಟಾರೆ 10000 ಶಿಕ್ಷಕರ ಹುದ್ದೆಗಳನ್ನು ನೇಮಕಾತಿ ಮಾಡಲು ಆರ್ಥಿಕ ಇಲಾಖೆಯ ಸಹಮತಿ ಕೋರಲಾಗಿರುತ್ತದೆ.<br><br>2022-23ನೇ ಸಾಲಿನಲ್ಲಿ ಕಲ್ಯಾಣ ಕರ್ನಾಟಕ ಭಾಗದ 07 ಜಿಲ್ಲೆಗಳಲ್ಲಿನ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ ಖಾಲಿ ಇದ್ದ ಪದವೀಧರ ಪ್ರಾಥಮಿಕ ಶಿಕ್ಷಕರು (6 ರಿಂದ 8 ನೇ ತರಗತಿ) ವೃಂದದ 5000 ಹುದ್ದೆಗಳ ಭರ್ತಿಗೆ ದಿನಾಂಕ 21.02.2022 ರಂದು ಅಧಿಸೂಚಿಸಲಾಗಿತ್ತು. ಈ ಹುದ್ದೆಗಳಿಗೆ ಎದುರಾಗಿ 4193 ಅಭ್ಯರ್ಥಿಗಳು ಅರ್ಹರಾಗಿದ್ದು, ಈ ಪೈಕಿ 3902 ಅಭ್ಯರ್ಥಿಗಳು ಕೌನ್ಸಿಲಿಂಗ್‌ಗೆ ಹಾಜರಾಗಿ ಸ್ಥಳ ಆಯ್ಕೆ ಮಾಡಿಕೊಂಡಿರುತ್ತಾರೆ ಮತ್ತು 3504 ಅಭ್ಯರ್ಥಿಗಳು ಈಗಾಗಲೇ ಶಾಲಾ ಕರ್ತವ್ಯಕ್ಕೆ ಹಾಜರಾಗಿರುತ್ತಾರೆ.<br><br>ಕಲ್ಯಾಣ ಕರ್ನಾಟಕ ಪ್ರದೇಶವೂ ಸೇರಿದಂತೆ ರಾಜ್ಯದಲ್ಲಿ ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆಗಳಿಗೆ ಎದುರಾಗಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಪ್ರತಿ ವರ್ಷದಂತೆ ಪ್ರಸ್ತುತ ಸಾಲಿನಲ್ಲಿಯೂ ಸಹ ಶೈಕ್ಷಣಿಕ ವರ್ಷದ ಅಂತ್ಯದವರೆಗೆ ತಾತ್ಕಾಲಿಕವಾಗಿ 42,817 ಅತಿಥಿ ಶಿಕ್ಷಕರನ್ನು ನೇಮಕ ಮಾಡಿಕೊಂಡು ಶಿಕ್ಷಕರ ಕೊರತೆಯನ್ನು ನೀಗಿಸಲು ಕ್ರಮವಹಿಸಲಾಗಿದೆ. |

Scanned with OKEN Scanner

| | | |
|---|---|---|
| ಇ) | ಪ್ರತಿ ವರ್ಷ ಈ ಭಾಗದ ಜಿಲ್ಲೆಗಳು ಎಸ್.ಎಸ್.ಎಲ್.ಸಿ/ಪಿಯುಸಿ ಪರೀಕ್ಷೆಗಳ ಫಲಿತಾಂಶದಲ್ಲಿ ಕೊನೆಯ ಸ್ಥಾನ ಪಡೆಯುತ್ತಿದ್ದು, ಇದಕ್ಕೆ ಶಿಕ್ಷಕರ ಕೊರತೆ ಕಾರಣವಲ್ಲವೇ; ಗುಣಮಟ್ಟದ ಶಿಕ್ಷಣ ನೀಡಲು ಸರ್ಕಾರವು ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ; | ಹೌದು<br><br>ಕಲ್ಯಾಣ ಕರ್ನಾಟಕ ಪ್ರದೇಶವೂ ಸೇರಿದಂತೆ ಸರ್ಕಾರಿ ಶಾಲೆಗಳಲ್ಲಿ ಖಾಲಿ ಇರುವ ಬೋಧಕ ಹುದ್ದೆಗಳ ಎದುರಾಗಿ ಮಾತ್ರ ಪ್ರಾಥಮಿಕ ಶಾಲೆಗಳಲ್ಲಿನ ಖಾಲಿ ಹುದ್ದೆಗಳಿಗೆ 33863 ಹಾಗೂ ಪ್ರೌಢಶಾಲೆಗಳಲ್ಲಿನ ಖಾಲಿ ಹುದ್ದೆಗಳಿಗೆ 8954 ಒಟ್ಟಾರೆ 42817 ಅತಿಥಿ ಶಿಕ್ಷಕರುಗಳನ್ನು ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ 4689 ಉಪನ್ಯಾಸಕರನ್ನು ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಪ್ರತಿ ವರ್ಷದಂತೆ ಪ್ರಸ್ತುತ ಸಾಲಿನಲ್ಲಿಯೂ ಸಹ ಶೈಕ್ಷಣಿಕ ವರ್ಷದ ಅಂತ್ಯದವರೆಗೆ ತಾತ್ಕಾಲಿಕವಾಗಿ ನೇಮಕ ಮಾಡಿಕೊಂಡು ಶಿಕ್ಷಕರ ಕೊರತೆಯನ್ನು ನೀಗಿಸುವುದರ ಜೊತೆಗೆ ಗುಣಮಟ್ಟದ ಶಿಕ್ಷಣ ನೀಡಲು ಕ್ರಮವಹಿಸಲಾಗಿದೆ.<br><br>ಮುಂದುವರೆದು, ಫಲಿತಾಂಶ ಸುಧಾರಣೆಗಾಗಿ ಕೆಳಕಂಡಂತೆ ಕ್ರಮವಹಿಸಿದೆ:-<br><br>1. ಶಾಲಾ ಉಸ್ತುವಾರಿ ನೋಡಲ್ ಅಧಿಕಾರಿಗಳಿಗೆ ದತ್ತು ಯೋಜನೆಯಲ್ಲಿ ಶಾಲೆಗಳನ್ನು ಹಂಚಿಕೆ ಮಾಡಿ ಶಾಲಾ ಗುಣಮಟ್ಟವನ್ನು ಹೆಚ್ಚಿಸಲು ಕ್ರಮವಹಿಸಲಾಗಿದೆ.<br>2. ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಉತ್ತಮ ಫಲಿತಾಂಶ ಪಡೆಯಲು ನೆರವಾಗುವಂತೆ 2023-24ನೇ ಸಾಲಿನಲ್ಲಿ 9ನೇ ತರಗತಿಯ ವಿದ್ಯಾರ್ಥಿಗಳಿಗೆ ಗಣಿತ, ವಿಜ್ಞಾನ ಮತ್ತು ಆಂಗ್ಲ ವಿಷಯದಲ್ಲಿ ಮರುಸಿಂಚನ ತರಬೇತಿ ಕಾರ್ಯಕ್ರಮ ನಡೆಸಿ ಕಲಿಕೆಯನ್ನು ಬಲವರ್ಧನೆಗೊಳಿಸಲಾಗಿದೆ.<br>3. 2024-25 ನೇ ಸಾಲಿನ ಎಸ್. ಎಸ್ ಎಲ್.ಸಿ ವಿದ್ಯಾರ್ಥಿಗಳು ಹಾಗೂ ಮುಂದೆ ಎಸ್.ಎಸ್.ಎಲ್.ಸಿ ಪರೀಕ್ಷೆಯನ್ನು ಸಮರ್ಥವಾಗಿ ಎದುರಿಸಿ ಉತ್ತಮ ಫಲಿತಾಂಶದೊಂದಿಗೆ ತೇರ್ಗಡೆ ಹೊಂದಲು ಅನುಕೂಲವಾಗುವಂತೆ 8, 9 ಮತ್ತು 10 ನೇ ತರಗತಿಯ ವಿದ್ಯಾರ್ಥಿಗಳಿಗೆ ಮರುಸಿಂಚನ ಕಾರ್ಯಕ್ರಮ ಹಮ್ಮಿಕೊಳ್ಳಲಾಗುತ್ತಿದೆ.<br>4. ಶಿಕ್ಷಕರಿಗೆ 9 -10 ನೇ ತರಗತಿಗಳ ಕಲಿಕಾ ಫಲ ಆಧಾರಿತ ಕಲಿಕೆಗೆ ಸಂಬಂಧಿಸಿದಂತೆ ತರಬೇತಿಗಳನ್ನು ನೀಡಲಾಗಿದೆ.<br>5. ರಾಷ್ಟ್ರೀಯ ಸಾಧನಾ ಪರೀಕ್ಷೆಯ ಫಲಿತಾಂಶಗಳನ್ನು ವಿಶ್ಲೇಷಿಸಿ ಕಡಿಮೆ ಸಾಧನೆ ಮಾಡಿದ ವಿಷಯಗಳಲ್ಲಿನ ಕಲಿಕಾ ಬೋಧನಾ ಕೊರತೆಗಳನ್ನು ಗುರ್ತಿಸಿ ಕಲಿಕಾ ಕೊರತೆ |

Scanned with OKEN Scanner

| | | |
|---|---|---|
| | | ನಿವಾರಣೆಗೆ ಕ್ರಮಗಳನ್ನು ಕೈಗೊಳ್ಳಲಾಗಿದ್ದು, ಈ ಸಂಬಂಧ ಅಗತ್ಯ ಮಾರ್ಗದರ್ಶನ ನೀಡಲಾಗಿದೆ.<br>6. ಜಿಲ್ಲಾ ಹಂತದಲ್ಲಿ ಉಪನಿರ್ದೇಶಕರ ನೇತೃತ್ವದಲ್ಲಿ ವಿಷಯವಾರು ಶಿಕ್ಷಕರ ವೇದಿಕೆಯಿಂದ ಕಠಿಣ ಬೋಧನೆ/ ಕಲಿಕಾಂಶಗಳಿಗೆ ಸೂಕ್ತ ಪರಿಹಾರಗಳನ್ನು ಗುರುತಿಸಲಾಗಿದ್ದು, ಅವುಗಳ ಅನುಷ್ಠಾನಕ್ಕೆ ಶಿಕ್ಷಕರಿಗೆ ಮಾರ್ಗದರ್ಶನ ನೀಡಲಾಗಿದೆ.<br>7. 2024-25 ನೇ ಸಾಲಿನಲ್ಲಿ ಪ್ರೌಢಶಾಲೆಯ ಶಿಕ್ಷಕರಿಗೆ ವಿಷಯವಾರು ಕಠಿಣ ಅಂಶಗಳನ್ನು ಗುರುತಿಸಿ ಪರಿಹಾರ ಒದಗಿಸಲು ವಿಷಯವಾರು ಕ್ಲಸ್ಟರ್ /ಹೋಬಳಿವಾರು ಮಾಸಿಕ ಸಮಾಲೋಚನಾ ಸಭೆಗಳನ್ನು ಆಯೋಜಿಸಲಾಗುತ್ತಿದೆ.<br>8. ಕಲ್ಯಾಣ ಕರ್ನಾಟಕದ ಜಿಲ್ಲೆಗಳಲ್ಲಿ ವಿಜ್ಞಾನ ವಿಭಾಗದಲ್ಲಿ ವಿದ್ಯಾರ್ಥಿಗಳ ದಾಖಲಾತಿಯನ್ನು ಹೆಚ್ಚಿಸಲು ಹಾಗೂ ಗುಣಮಟ್ಟದ ಶಿಕ್ಷಣ ನೀಡಲು ವಿಜ್ಞಾನ ಸಂಯೋಜನೆ ಹೊಂದಿರುವ 60 ಸರ್ಕಾರಿ ಪದವಿ ಪೂರ್ವ ಕಾಲೇಜುಗಳನ್ನು ಆದರ್ಶ ವಿಜ್ಞಾನ ಸರ್ಕಾರಿ ಪದವಿ ಪೂರ್ವ ಕಾಲೇಜುಗಳನ್ನಾಗಿ ಉನ್ನತೀಕರಿಸಲಾಗಿದೆ.<br>9. ನೇರ ನೇಮಕಾತಿ ಕೋಟಾದಡಿ ಖಾಲಿ ಇರುವ 405 ಉಪನ್ಯಾಸಕ ಹುದ್ದೆಗಳ ನೇಮಕಾತಿಗೆ ಆರ್ಥಿಕ ಇಲಾಖೆಯ ಸಹಮತಿ ಕೋರಲಾಗಿದೆ.<br>10. 2024-25ನೇ ಸಾಲಿನ ರಾಜ್ಯ ಆಯವ್ಯಯದ ಕಂಡಿಕೆ 101ರಲ್ಲಿ ಘೋಷಿಸಿರುವಂತೆ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ರಾಜ್ಯದ ವಿಜ್ಞಾನ ವಿಷಯಗಳನ್ನು ಬೋಧಿಸುತ್ತಿರುವ 671 ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಒಟ್ಟು 70000 ಪ್ರಥಮ ಮತ್ತು ದ್ವಿತೀಯ ಪಿಯುಸಿ ವಿದ್ಯಾರ್ಥಿಗಳಲ್ಲಿ ಆಯ್ದ 25000 ವಿದ್ಯಾರ್ಥಿಗಳಿಗೆ CET/NEET/JEE ಆನ್‌ಲೈನ್ ತರಗತಿಗಳನ್ನು ನಡೆಸಲು ಪ್ರತಿ ವಿದ್ಯಾರ್ಥಿಗೆ ರೂ. 5000/-ಗಳಂತೆ ಒಟ್ಟು ರೂ.12.50ಕೋಟಿ ಅನುದಾನ ಬಿಡುಗಡೆ ಮಾಡಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.<br>11.2024-25ನೇ ಸಾಲಿನ ರಾಜ್ಯ ಆಯವ್ಯಯದ ಕಂಡಿಕೆ 100ರಲ್ಲಿ ಘೋಷಿಸಿರುವಂತೆ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಸರ್ಕಾರಿ ವಿಜ್ಞಾನ ಪದವಿ ಪೂರ್ವ ಕಾಲೇಜುಗಳನ್ನು ಉನ್ನತೀಕರಿಸಿ ಖಾಸಗಿ ಕಾಲೇಜುಗಳ ವ್ಯವಸ್ಥೆಗೆ ಸರಿಹೊಂದುವಂತೆ ಮಾಡುವ ಉದ್ದೇಶದಿಂದ ವಿಜ್ಞಾನ ವಿಭಾಗವನ್ನು ಹೊಂದಿರುವ 614 ಪದವಿ ಪೂರ್ವ ಕಾಲೇಜುಗಳ ವಿಜ್ಞಾನ |

Scanned with OKEN Scanner

| | | |
|---|---|---|
| | | ಪ್ರಯೋಗಾಲಯವನ್ನು ಉನ್ನತೀಕರಿಸಲು ರೂ. 10. ಕೋಟಿ ಅನುದಾನ ಬಿಡುಗಡೆ ಮಾಡಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.<br>12.100 ಸರ್ಕಾರಿ ಪದವಿಪೂರ್ವ ಕಾಲೇಜುಗಳಲ್ಲಿ ಗಣಕ ವಿಜ್ಞಾನ ಸಂಯೋಜನೆಯನ್ನು ಪ್ರಾರಂಭಿಸಲಾಗುವುದು. |
| ಈ) | ಶಿಕ್ಷಣದ ಗುಣಮಟ್ಟ ಮತ್ತು ಶಿಕ್ಷಕರ ನೇಮಕಾತಿಯಲ್ಲಿ ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿಯ (ಕೆಕೆಆರ್‌ಡಿಬಿ) ಪಾತ್ರವೇನು? | ಶಿಕ್ಷಣದ ಗುಣಮಟ್ಟ ಮತ್ತು ಶಿಕ್ಷಕರ ನೇಮಕಾತಿಯಲ್ಲಿ ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿಯ ವತಿಯಿಂದ ಈ ಕೆಳಗಿನಂತೆ ಕ್ರಮವಹಿಸಲಾಗಿದೆ:-<br>1. 2023-24 ನೇ ಸಾಲಿನಲ್ಲಿ 10 ನೇ ತರಗತಿಗೆ ಅಕ್ಷರ ಆವಿಷ್ಕಾರ ಯೋಜನೆಯಡಿ ವಿದ್ಯಾರ್ಥಿಗಳಿಗೆ ಕಲಿಕಾ ಸಭೆ ಅಭ್ಯಾಸ ಪುಸ್ತಕವನ್ನು ಪೂರೈಸಲಾಗಿರುತ್ತದೆ.<br>2. 2024-25 ನೇ ಸಾಲಿಗೆ 8 ನೇ ತರಗತಿ ಕಲಿಕಾ ಸಭೆ ಪುಸ್ತಕ ಪೂರೈಕೆ ಕಾರ್ಯ ಪ್ರಗತಿಯಲ್ಲಿದೆ.<br>3. 2024-25 ನೇ ಸಾಲಿಗೆ 1008 ಇಸಿಸಿಇ (ಪೂರ್ವ ಪ್ರಾಥಮಿಕ ಶಾಲೆಗಳು) 872 ದ್ವಿಭಾಷಾ ಶಾಲೆಗಳು, 306 ಸರ್ಕಾರಿ ಪ್ರೌಢ ಶಾಲೆಗಳಲ್ಲಿ ವೃತ್ತಿ ಶಿಕ್ಷಣ ತರಬೇತಿಯೊಂದಿಗೆ, ಮಕ್ಕಳ ಕಲಿಕಾ ಗುಣಮಟ್ಟದ ಸುಧಾರಣೆಯನ್ನು ಅಭಿವೃದ್ಧಿಪಡಿಸಲಾಗುತ್ತಿದೆ.<br>4. ಬೋಧನಾ ಕಲಿಕಾ ಕೊರತೆ ಇರುವ 2566 ಪ್ರಾಥಮಿಕ ಹಾಗೂ 52 ಪ್ರೌಢ ಶಾಲೆಗಳಲ್ಲಿ ಅಕ್ಷರ ಮಿತ್ರ ಯೋಜನೆಯಡಿಯಲ್ಲಿ ಅತಿಥಿ ಶಿಕ್ಷಕರುಗಳನ್ನು ಕೆಕೆಆರ್‌ಡಿಬಿ ವತಿಯಿಂದ ನೇಮಕಾತಿ ಮಾಡಿಕೊಳ್ಳಲಾಗಿದೆ. |

ಇಪಿ 296 ಪಿಬಿಎಸ್ 2024

(ಎಸ್. ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

Scanned with OKEN Scanner